(೨) ಕರ್ನಾಟಕ ಧನ ವಿನಿಯೋಗ (ಸಂಖ್ಯೆ ೬) ವಿಧೇಯಕ, ೧೯೮೬ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್.—(ಕಾನೂನು ಮತ್ತು (ಆಹಾರ ಸಚಿವರು) ಮುಖ್ಯಮಂತ್ರಿಗಳ ಪರವಾಗಿ) ಮಾನ್ಯ ಅಧ್ಯಕ್ಷರೇ, ಕರ್ನಾಟಕ ಧನ ವಿನಿಯೋಗ (ಸಂಖ್ಯೆ.೬) ವಿಧೇಯಕ ೧೯೮೬ನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು —ಇದಕ್ಕೆ ಸರ್ವಾನುಮತದ ಒಪ್ಪಿಗೆ ಇದೆ ಎಂದು ನಾನು ತಿಳಿಯುತ್ತೇನೆ. ಮತ್ತು ಈಗ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ ''೧೯೮೬ನೇ ಕರ್ನಾಟಕ ಧನವಿನಿಯೋಗ (ಸಂಖ್ಯೆ. ೬) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು.—೨ನೇ ಮತ್ತು ೩ನೇ ಖಂಡ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ ಮತ್ತು ೩ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು

ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಆಹಾರ ಸಚಿವರು).—ಕರ್ನಾಟಕ ಧನವಿನಿಯೋಗ (ಸಂಖ್ಯೆ.೬) ವಿಧೇಯಕ, ೧೯೮೬ನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೬ನೇ ಕರ್ನಾಟಕ ಧನ ವಿನಿಯೋಗ (ಸಂಖ್ಯೆ.೬) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ಮುಂಸೂದೆಗೆ ಸರ್ವಾನುಮತದಿಂದ ಒಪ್ಪಿಗೆ ನೀಡಲಾಯಿತು